ಕರ್ನಾಟಕ ಸರ್ಕಾರ

ಸಂಖ್ಯೆ: ಕಾಇ 33 ಎಲ್‌ಇಟಿ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ:24-06-2020

**ಅಧಿಸೂಚನೆ**

1948ರ ಕನಿಷ್ಠ ವೇತನ ಕಾಯ್ದೆ (1948ರ ಕೇಂದ್ರಾಧಿನಿಯಮ 11) ರ ಅನುಸೂಚಿಗೆ "**ರೆಡಿಮಿಕ್ಸ್ ಕಾಂಕ್ರೀಟ್ ಕಾರ್ಖಾನೆಗಳಲ್ಲಿ ಉದ್ಯೋಗ**" ಈ ಉದ್ದಿಮೆಯನ್ನು ಸೇರ್ಪಡೆಗೊಳಿಸಿ, ಕನಿಷ್ಠ ವೇತನ ದರಗಳನ್ನು ನಿಗದಿಪಡಿಸಬೇಕೆಂದು ಕರ್ನಾಟಕ ಸರ್ಕಾರವು ಭಾವಿಸಿರುವುದರಿಂದ, ಕಾಯ್ದೆಯ ಕಲಂ 27ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಈ ಅಧಿಸೂಚನೆಯನ್ನು ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿಸಿದ ಮೂರು ತಿಂಗಳುಗಳ ನಂತರ ಮೇಲ್ಕಂಡ ಉದ್ಯೋಗವನ್ನು ಸದರಿ ಕಾಯ್ದೆಯ ಅನುಬಂಧದ ಭಾಗ-1ಕ್ಕೆ ಸೇರಿಸುವ ಕರ್ನಾಟಕ ಸರ್ಕಾರದ ಉದ್ದೇಶದ ಬಗ್ಗೆ ಸೂಚನೆ ನೀಡಲಾಗುತ್ತಿದೆ.

ಈ ಬಗ್ಗೆ ಮೇಲ್ಕಂಡ ಅವಧಿಯೊಳಗೆ ಬರುವ ಆಕ್ಷೇಪಣೆಗಳು ಅಥವಾ ಸಲಹೆಗಳನ್ನು ರಾಜ್ಯ ಸರ್ಕಾರವು ಪರಿಶೀಲನೆಗಾಗಿ ತೆಗೆದುಕೊಳ್ಳುತ್ತದೆ. ಆಕ್ಷೇಪಣೆ ಮತ್ತು ಸಲಹೆಗಳಿದ್ದಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಾರ್ಮಿಕ ಇಲಾಖೆ, ಕೊಠಡಿ ಸಂಖ್ಯೆ: 414, 4ನೇ ಮಹಡಿ ವಿಕಾಸ ಸೌಧ, ಬೆಂಗಳೂರು-560 001 ಇವರಿಗೆ ಕಳುಹಿಸುವುದು.

74
13/7/20

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸಂಧ್ಯಾ.ಎಲ್.ನಾಯಕ್)
ಸರ್ಕಾರದ ಉಪ ಕಾರ್ಯದರ್ಶಿ
ಕಾರ್ಮಿಕ ಇಲಾಖೆ

ಕಾರ್ಮಿಕ ಆಯುಕ್ತರವರ ಕಚೇರಿ ... ಬನ್ನೇರುಘಟ್ಟ ರಸ್ತೆ, ಬೆಂಗಳೂರು - 29.
ನಂ 310
ದಿನಾಂಕ

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು – ಈ ಅಧಿಸೂಚನೆಯನ್ನು ಇ-ಗೆಜೆಟ್ ನಲ್ಲಿ ಪ್ರಕಟಿಸುವುದು.

ಪ್ರತಿಯನ್ನು:

1) ಕಾರ್ಮಿಕ ಆಯುಕ್ತರು, ಕಾರ್ಮಿಕ ಭವನ, ಬನ್ನೇರುಘಟ್ಟ ರಸ್ತೆ, ಬೆಂಗಳೂರು.
2) ಸದಸ್ಯ ಕಾರ್ಯದರ್ಶಿ, ಕರ್ನಾಟಕ ಕನಿಷ್ಠ ವೇತನ ಸಲಹಾ ಮಂಡಳಿ, ಕಾರ್ಮಿಕ ಭವನ, ಬನ್ನೇರುಘಟ್ಟ ರಸ್ತೆ, ಬೆಂಗಳೂರು.
3) ಮಾನ್ಯ ಕಾರ್ಮಿಕ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
3) ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
5) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.